## ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ ತಿ.ನರಸೀಪುರ.

## ಸಿ ಸಿ ನಂ.6/2019

| | | |
|---|---|---|
| ಸಾಕ್ಷಿದಾರರ ಹೆಸರುಃ | ಜಯರಾಮ ನಾಯಕ | ಸಿ ಡಬ್ಲ್ಯೂಃ 6 |
| ತಂದೆಯ ಹೆಸರುಃ | ಲೇಟ್ ಹೊನ್ನಯ್ಯ | ಪಿ ಡಬ್ಲ್ಯೂಃ 3 |
| ವಯಸ್ಸುಃ | 59 ವರ್ಷ | |
| ಉದ್ಯೋಗಃ | ಪಿಎಸ್‌ಐ,<br>ಬನ್ನೂರು ಪೊಲೀಸ್ ಠಾಣೆ | ಪ್ರ.ವ .ಬೋ.ದಿಃ |
| ವಾಸಸ್ಥಳಃ | ಬನ್ನೂರು | 08.01.2024 |

ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ

ದಿನಾಂಕ ಮೇ 2014 ರಿಂದ 2019 ರವರೆಗೆ ನಾನು ಬನ್ನೂರು ಪೋಲಿಸ್ ಠಾಣೆಯಲ್ಲಿ ಎ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿನಾಂಕ 08.04.2018 ರಂದು ಬೆಳಿಗ್ಗೆ 11.00 ಗಂಟೆ ಸಮಯದಲ್ಲಿ ಚಾಸಾ-1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತದೂರನ್ನು ನೀಡಿದ್ದು, ಅದನ್ನು ಸ್ವೀಕರಿಸಿ ಠಾಣಾ ಗುನ್ನೆ ಸಂ.186/2018 ರಂತೆ ಪ್ರವವ ವರದಿ ದಾಖಲಿಸಿ ಮಾನ್ಯ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ಕಳುಹಿಸಿ ಕೊಟ್ಟಿರುತ್ತೇನೆ. ಅದೇ ದಿನ ಕೃತ್ಯ ಸ್ಥಳಕ್ಕೆ ಭೇಟಿ ನೀಡಿ ಚಾಸಾ-1 ರವರು ತೋರಿಸಿದಂತೆ ಚಾಸಾ-4 ಮತ್ತು 5 ರವರ ಸಮಕ್ಷಮ ಸಂಜೆ 4.00 ಗಂಟೆಯಿಂದ 4.45 ಗಂಟೆವರೆಗೆ ಪಂಚನಾಮೆಯನ್ನು ಮಾಡಿರುತ್ತೇನೆ. ಅದೇ ದಿನ ಪ್ರತ್ಯಕ್ಷ ಸಾಕ್ಷಿದಾರರಾದ ಚಾಸಾ-2 ಮತ್ತು ಚಾಸಾ-3 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

ದಿನಾಂಕ 07.10.2018 ರಂದು ತನಿಖೆ ಪೂರ್ಣಗೊಳಿಸಿ ಆರೋಪಿತರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿರುತ್ತೇನೆ.

ಸಾಕ್ಷಿಯು ಚಾಸಾ-1 ರವರಿಂದ ಸ್ವೀಕರಿಸಿದ ದೂರನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿ ಸಹಿಯನ್ನು **ನಿಪಿ-1 ಬಿ** ಎಂದು, ಅದೇ ರೀತಿ ಸಾಕ್ಷಿಯು ಕೃತ್ಯ ಸ್ಥಳ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿ ಸಹಿಯನ್ನು **ನಿಪಿ-2 ಬಿ** ಎಂದು, ಪ್ರವವ ವರದಿಯನ್ನು **ನಿಪಿ-4** ಎಂದು, ಸಾಕ್ಷಿ ಸಹಿಯನ್ನು **ನಿಪಿ-4 ಎ** ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ ಆರೋಪಿಗಳ ಪರ ಬಿ.ಎಂ.ಎನ್ ವಕೀಲರಿಂದಃ</u>

ಕೃತ್ಯವು ದಿನಾಂಕ 06.04.2018 ರಂದು ನಡೆದಿರುತ್ತದೆ ಎಂದು ನಿಪಿ-1 ದೂರಿನಲ್ಲಿ ತಿಳಿಸಿದ್ದು, ನಿಪಿ-1 ದೂರನ್ನು ದಿನಾಂಕ 08.04.2018 ರಂದು ನೀಡಿದ್ದು, ಸದರಿ ದೂರನ್ನು 2 ದಿನಗಳ ವಿಳಂಭವಾಗಿ ನೀಡಿದ್ದ ಬಾಬ್ತು ಚಾಸಾ-1 ರವರು ಕಾರಣವನ್ನು ನೀಡಿರುತ್ತಾರೆ. ಸಿವಿಲ್ ಸ್ವರೂಪದ ವ್ಯಾಜ್ಯಗಳು ನಮ್ಮ ಠಾಣಾ ವ್ಯಾಪ್ತಿಗೆ ಬರುವುದಿಲ್ಲ ಎಂದರೆ ಸರಿ.

ನಾನು ಕೃತ್ಯ ಸ್ಥಳಕ್ಕೆ ಸಂಜೆ 4 ಗಂಟೆ ಸಮಯಕ್ಕೆ ಹೋಗಿರುತ್ತೇನೆ. ಕೃತ್ಯ ಸ್ಥಳಕ್ಕೆ ನಾನು ಹಾಗೂ ನಮ್ಮ ಸಿಬ್ಬಂಧಿ ಹೋಗಿರುತ್ತೇವೆ. ನಿಪಿ-1 ದೂರನಲ್ಲಿ ತಿಳಿಸಿರುವ ಆಸ್ತಿಯ ಬಾಬ್ತು ಗ್ರಾಮ ಪಂಚಾಯತಿಯಿಂದ ದಾಖಲೆಗಳನ್ನು ಪಡೆದುಕೊಂಡಿರುವುದಿಲ್ಲ, ಅದಕ್ಕೆ

ಸಂಬಂಧಿಸಿದಂತೆ ಪಂಚಾಯತಿಯ ಅಧಿಕಾರಿಯಿಂದ ದಾಖಲೆಗಳನ್ನು ಪಡೆದುಕೊಂಡಿರುವುದಿಲ್ಲ.

ನಾನು ಕೃತ್ತ ಸ್ಥಳಕ್ಕೆ ಭೇಟಿ ನೀಡಿರುವುದಿಲ್ಲ ಹಾಗೂ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿತರು ಯಾವುದೇ ಕೃತ್ತ ಮಾಡದಿದ್ದರೂ ಸಹ ಅವರ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿ, ಸುಳ್ಳು ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

ತೆರೆದ ನ್ಯಾಯಾಲಯದಲ್ಲಿ ಈ ಮೇಲೆ ಸಾಕ್ಷಿ ಸ್ವತಃ ಹೇಳಿದ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ.

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,
ತಿ.ನರಸೀಪುರ.